ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 30-03-2021 ಪ್ರಶ್ನೆ ಸಂಖ್ಯೆ : 2087(2437)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 30-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಅಗತ್ಯ ವಸ್ತುಗಳ (ತಿದ್ದುಪಡಿ) ಕಾಯ್ದೆ-2020ರ ಬಗ್ಗೆ

(ಅ) ಅಗತ್ಯ ವಸ್ತುಗಳ (ತಿದ್ದುಪಡಿ) ಕಾಯ್ದೆ-2020 ರಂತೆ ಎಣ್ಣೆ ಕಾಳು, ದ್ವಿದಳ ಧಾನ್ಯ, ಈರುಳ್ಳಿ, ಆಲೂಗಡ್ಡೆ, ಅಡುಗೆ ಎಣ್ಣೆ ಮುಂತಾದವುಗಳನ್ನು ಅಗತ್ಯ ಸಾಮಗ್ರಿಗಳ ಪಟ್ಟಿಯಿಂದ ಹೊರತಂದ ನಂತರ ಮತ್ತು ಈ ಸಾಮಗ್ರಿಗಳ ಮೇಲೆ ವಿಧಿಸಿದ ದಾಸ್ತಾನು ಮಿತಿಯನ್ನು ತೆಗೆದ ನಂತರ ಬ್ಲ್ಯಾಕ್ ಮಾರ್ಕೆಟ್‌ನಲ್ಲಿ ಪದಾರ್ಥಗಳನ್ನು ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಈ ಪದಾರ್ಥಗಳು ಮುಕ್ತ ಮಾರುಕಟ್ಟೆಗೆ ವ್ಯಾಪಾರಿಗಳು ತಂದು ಹೆಚ್ಚಿನ ದರದಲ್ಲಿ ಮಾರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಈ ಕಪ್ಪು ಮಾರುಕಟ್ಟೆಯನ್ನು ತೊಡೆದುಹಾಕಲು ರಾಜ್ಯ ಸರ್ಕಾರ ಯಾವ ಕಾಯ್ದೆ ಮತ್ತು ನಿಯಮದ ಅಡಿ ಕ್ರಮ ಜರುಗಿಸಿದೆ? (ವಿವರ ನೀಡುವುದು)